# “ಆಕಾಶ ವೀಕ್ಷಣೆ”

## ಖಗೋಳ ವಿಜ್ಞಾನ ಕಾರ್ಯಕ್ರಮ

**ದಿನಾಂಕ:** 06.01.2024 ರಂದು **ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ** ಹಾಗೂ **ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಡಿಹಾಳ, ತಾ॥ ಮುದ್ದೇಬಿಹಾಳ** ಇವರ ಸಂಯುಕ್ತ ಆಶ್ರಯದಲ್ಲಿ **“ಆಕಾಶ ವೀಕ್ಷಣೆ”** ಎಂಬ ಖಗೋಳ ವಿಜ್ಞಾನ ಕಾರ್ಯಕ್ರಮವನ್ನು ಆಯೋಜಿಸಲಾಯಿತು, ಈ ಕಾರ್ಯಕ್ರಮದಲ್ಲಿ **ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಡಿಹಾಳ** ನ ಒಟ್ಟು 120 ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಮುಂದುವರೆದು, ಅಧ್ಯಕ್ಷೀಯ ಭಾಷಣ ಮಾಡಿದ **ಶ್ರೀ ಸಂಗಮೇಶ ನವಲಿ,** ಮುಖ್ಯೋಪಾಧ್ಯಯರು, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಡಿಹಾಳ, ತಾ॥ ಮುದ್ದೇಬಿಹಾಳ ರವರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ವತಿಯಿಂದ ಆಗಮಿಸಿದ್ದ ಸಂಪನ್ಮೂಲ ವ್ಯಕ್ತಿಗಳಿಂದ ಖಗೋಳ ವಿಜ್ಞಾನದ ಮಾಹಿತಿಯನ್ನು ಪಡೆದುಕೊಂಡು ಸದರಿ ವಿಷಯದ ಮೇಲೆ ಹೆಚ್ಚಿನ ಆಸಕ್ತಿಯನ್ನು ರೂಢಿಸಿಕೊಳ್ಳುವಂತೆ ಕರೆ ನೀಡಿದರು ಹಾಗೂ ಸದರಿ ಕಾರ್ಯಕ್ರಮಕ್ಕೆ ತಮ್ಮ ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ಎಲ್ಲ ಸಿಬ್ಬಂದಿ ವರ್ಗಕ್ಕೆ ಧನ್ಯವಾದಗಳನ್ನು ತಿಳಿಸಿದರು.

ಅದರಂತೆ, ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ **ಶ್ರೀ ವಿಜಯಕುಮಾರ ಕೆ.** ವಿಜ್ಞಾನ ಶಿಕ್ಷಕರು, **ಶಂಕ್ರಪ್ಪ** ಸಕ್ರಿ ಪ್ರೌಢಶಾಲೆ (ಅನುದಾನಿತ), ಬಾಗಲಕೋಟೆರವರು ಮಾತನಾಡಿ, ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದಂತೆ ವಿವಿಧ ಆಕಾಶ ಕಾಯಗಳು, ನಕ್ಷತ್ರ ಪುಂಜಗಳು, ವಿವಿಧ ಗ್ರಹಗಳ ಹಾಗೂ ಇನ್ನುಳಿದ ಖಗೋಳ ವಿಜ್ಞಾನದ ರಹಸ್ಯಕರ ಮಾಹಿತಿಗಳನ್ನು ವಿವರವಾಗಿ ತಿಳಿಸಿದರು. ಮುಂದುವರೆದು, ವಿದ್ಯಾರ್ಥಿಗಳಿಗೆ ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದ ಪ್ರಶ್ನೋತ್ತರ ಚಟುವಟಿಕೆಯನ್ನು ನಡೆಸುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಖಗೋಳ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸಿದರು ಹಾಗೂ ಸರಿಯಾದ ಉತ್ತರ ನೀಡಿದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಿದರು.

ಕಾರ್ಯಕ್ರಮದ ಭಾಗವಾಗಿ, ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ಹಾಗೂ ಸಾರ್ವಜನಿಕರಿಗೆ ದೂರದರ್ಶಕದ (Telescope) ಮಾಹಿತಿ ನೀಡಲಾಯಿತು ಹಾಗೂ ಕೆಲ ನಕ್ಷತ್ರ ಪುಂಜಗಳ ಮತ್ತು ಆಕಾಶ ಕಾಯಗಳನ್ನು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರು ದೂರದರ್ಶಕದ ಮೂಲಕ ನೋಡಿ ಆನಂದಿಸಿದರು.

ಸದರಿ ಕಾರ್ಯಕ್ರಮದಲ್ಲಿ **ಶ್ರೀ ಈರಣ್ಣ ಬುಳ್ಳಾ,** ಕ್ಯೂರೇಟರ್, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಡಿಹಾಳನ ಶಿಕ್ಷಕರು, ಸಿಬ್ಬಂದಿಗಳು ಹಾಗೂ ಗುಡಿಹಾಳ ಗ್ರಾಮದ ಗುರು ಹಿರಿಯರು ಮತ್ತು ಗಣ್ಯ ವ್ಯಕ್ತಿಗಳು ಉಪಸ್ಥಿತರಿದ್ದರು.


ಕಾರ್ಯಕ್ರಮಗಳಿಗೆ ಸರ್ವರಿಗೂ ಹಾರ್ದಿಕ ಸ್ವಾಗತ
ಭುವನ್ ಸೌಂಡ್ ಸಿಸ್ಟಮ್
8861276888
ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ
ಆಕಾಶ ವೀಕ್ಷಣೆ ಕಾರ್ಯಕ್ರಮ




ಕಾರ್ಯಕ್ರಮಗಳಿಗೆ ಸರ್ವರಿಗೂ











***********